ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಇರುವ ಯೋಜನೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

237 (367) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಣೆ ಮಾಡಲು ಅನುಸರಿಸಲಾಗಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಕೆರೆಗಳಲ್ಲಿ/ಡ್ಯಾಂ /ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ನೀಡಿರುವ ಅನುದಾನವೆಷ್ಟು; (ವರ್ಷವಾರು ಹಾಗೂ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ಟೆಂಡರ್ ಕರೆಯಲಾಗಿದೆ; (ವರ್ಷವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಅವಧಿಯಲ್ಲಿ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಯಾವ ಯಾವ ಯೋಜನೆಗಳಲ್ಲಿ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ; (ವರ್ಷವಾರು ಹಾಗೂ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆ ವತಿಯಿಂದ ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿರುವ ಮನೆಗಳೆಷ್ಟು; ಫಲಾನುಭವಿಗಳನ್ನು ಆಯ್ಕೆ

ಮಾಡಲು ಅನುಸರಿಸಲಾಗಿರುವ ಮಾನದಂಡಗಳೇನು ? (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)